ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಗುರುವಾರ, ದಿನಾಂಕ : 10 ನೇ ಡಿಸೆಂಬರ್, 2020

1995 ರ ನಂತರದ ಶಾಲಾ-ಕಾಲೇಜುಗಳಿಗೆ ಹಣಕಾಸು ಇಲಾಖೆ ಅನುದಾನ ನೀಡುವ ಬಗ್ಗೆ

ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ(ಶಿಕ್ಷಕರ ಕ್ಷೇತ್ರ) –

46 (501) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕೋವಿಡ್-19ರ ಪ್ರಯುಕ್ತ ಎಲ್ಲಾ ನೇಮಕಾತಿಗಳಿಗೂ ಆರ್ಥಿಕ ಮಿತವ್ಯಯ ಹೇರಿರುವುದು ನಿಜವೇ; ಹಾಗಾದರೆ, ಈ ಆದೇಶವನ್ನು ಯಾವಾಗ ಹಿಂಪಡೆಯಲಾಗುವುದು;

(ಆ) ಹಣಕಾಸು ಇಲಾಖೆಯು ರಾಜ್ಯದಲ್ಲಿ 1995ರ ನಂತರ ಪ್ರಾರಂಭವಾದ ಎಲ್ಲಾ ವರ್ಗದ ಅರ್ಹವಾದ ಶಾಶ್ವತ ಅನುದಾನ ರಹಿತ ಶಾಲಾ ಕಾಲೇಜುಗಳಿಗೆ ಅನುದಾನ ನೀಡಲು ಇರುವ ತೊಂದರೆಗಳೇನು;(ವಿವರವಾದ ಮಾಹಿತಿ ನೀಡವುದು )

(ಇ) ಯಾವ ಕಾಲಮಿತಿಯೊಳಗೆ ಸರ್ಕಾರ ಈ ಶಾಲಾ-ಕಾಲೇಜುಗಳಿಗೆ ಅನುದಾನ ನೀಡುವುದು?